ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ,
4ನೇ ಬ್ಲಾಕ್, ಜಯನಗರ, ಬೆಂಗಳೂರು – 560 041
Rajiv Gandhi University of Health Sciences, Karnataka
4th 'T' Block, Jayanagar, Bangalore – 560 041

ರಾಗಾಆವಿವಿ/ಪ್ರವೇಶಾತಿ/ಜಿ.ಎಲ್–02/2023–24 ದಿನಾಂಕ:20.12.2023

ಗೆ,
ಪ್ರಾಂಶುಪಾಲರು/ಡೀನ್/ಡೈರೆಕ್ಟರ್,
ರಾಗಾಆವಿವಿ ವಿಶ್ವವಿದ್ಯಾಲಯದ ಸಂಯೋಜಿತ
ಎಲ್ಲಾ ಕಾಲೇಜುಗಳು

ಮಾನ್ಯರೆ,

**ವಿಷಯ:** 2022–23ನೇ ಸಾಲಿನಲ್ಲಿ ಪ್ರವೇಶ ಪಡೆದಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಮಾಹಿತಿ ನೀಡುವ ಕುರಿತು.

**ಉಲ್ಲೇಖ:** ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಉತ್ತರ ತಾಲ್ಲೂಕು ಸಹಾಯಕ ನಿರ್ದೇಶಕರ ಪತ್ರ ಸಂಖ್ಯೆ:ಸನಿ/ಬೆಂ(ಉ)/ಸಿಬ್ಬಂದಿ/ಸಿ.ಆರ್–73/2023–24, ದಿನಾಂಕ:24.11.2023. (ದಿನಾಂಕ:12.12.2023).

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದಲ್ಲಿ ನಮೂದಿಸಿರುವ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರವನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ತಿಳಿಸಿರುವಂತೆ 2023–24ನೇ ಶೇಕ್ಷಣಿಕ ಸಾಲು ಹಾಗೂ ಹಿಂದಿನ ವರ್ಷಗಳಲ್ಲಿ ಪ್ರವೇಶ ಪಡೆದಿರುವ ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಪಾವತಿಸುವ ಸಂಬಂಧ ಅರ್ಜಿಯೊಂದಿಗೆ ಸಲ್ಲಿಸಬೇಕಾದ ಮಾಹಿತಿಯ ವಿವರಗಳನ್ನು ವಿದ್ಯಾರ್ಥಿಗಳು ತಮ್ಮ ಖಾತೆ ಹೊಂದಿರುವ ಬ್ಯಾಂಕುಗಳನ್ನು ಸಂಪರ್ಕಿಸಿ ತುರ್ತಾಗಿ ಆಧಾರ್ ಸಂಖ್ಯೆಯನ್ನು NPCI ಗೆ ಲಿಂಕ್ ಮಾಡಿಸಲು ಸೂಚಿಸಿರುತ್ತಾರೆ. ಅದರಂತೆ ಸೂಕ್ತ ಕ್ರಮವಹಿಸಲು ತಿಳಿಸಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ಕುಲಸಚಿವರು

R-996007
12/12/2023

ಕರ್ನಾಟಕ ಸರ್ಕಾರ

# ಸಹಾಯಕ ನಿರ್ದೇಶಕರು ಗ್ರೇಡ್-1ರವರ ಕಛೇರಿ ಸಮಾಜ ಕಲ್ಯಾಣ ಇಲಾಖೆ


**2ನೇ ಮಹಡಿ, ಮಿನಿ ವಿಧಾನಸೌಧ, ಯಲಹಂಕ, ಬೆಂಗಳೂರು ಉತ್ತರ ತಾಲ್ಲೂಕು-560 064**

ಫೋನ್: 080-28461351 ಟೆಲಿಫ್ಯಾಕ್ಸ್: 080-28461356 Email: tswdblr.north@gmail.com


ಸಂ:ಸನಿ/ಸಕಇ/ಬೆಂ(ಉ)/ಸಿಬ್ಬಂದಿ/ಸಿಆರ್-73/2023-24 ದಿನಾಂಕ:24.11.2023

ಗೆ,

ಕುಲಸಚಿವರು/ ನಿರ್ದೇಶಕರು/ಡೀನ್

ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ

ಜಯನಗರ, 4th T. Block

ಬೆಂಗಳೂರು - 41.

ಮಾನ್ಯರೇ,

ವಿಷಯ:--2023-24 ನೇ ಸಾಲಿಗೆ ಪರಿಶಿಷ್ಟ ಜಾತಿ ಹಾಗು ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಮಾಹಿತಿ ನೀಡುವ ಕುರಿತು

**ಉಲ್ಲೇಖ :** 1) ನಿರ್ದೇಶಕರ ರವರ ಕಛೇರಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಪತ್ರ ಸಂಖ್ಯೆ: ಪವಕನಿ:ಬುಉಯೋ:ಸಿ.ಆರ್-50/2021-22

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023-24 ನೇ ಸಾಲಿಗೆ ಪರಿಶಿಷ್ಟ ಜಾತಿ ಹಾಗು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು ವಾರ್ಷಿಕ ಆದಾಯ ಮಿತಿ 2.5 ಲಕ್ಷದೊಳಗಿರುವ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಣೆ ಮಾಡುವುದು ಖಡ್ಡಾಯವಾಗಿರುತ್ತದೆ. ಆಧಾರ್ ಜೋಡಣೆಯಾಗಿಲ್ಲದ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಆಧಾರ್ ಜೋಡಣೆ ಮಾಡದಿರುವ ವಿದ್ಯಾರ್ಥಿಗಳಿಗೆ ಖಾತೆ ಹೊಂದಿರುವ ಬ್ಯಾಂಕ್‌ಗಳನ್ನು ಸಂಪರ್ಕಿಸಿ ತುರ್ತಾಗಿ ಆಧಾರ್ ಸಂಖ್ಯೆಯನ್ನು NPCI ಗೆ ಲಿಂಕ್ ಮಾಡಿಸಲು ಜಾಗೃತಿ ಮೂಡಿಸುವಂತೆ, ಪರಿಶಿಷ್ಟ ಜಾತಿ ಹಾಗು ವರ್ಗಗಳ ಕಲ್ಯಾಣ ಇಲಾಖೆಯಿಂದ ನಿರ್ದೇಶನ ನೀಡಿರುವುದರಿಂದ ತುರ್ತಾಗಿ ತಾವು ತಮ್ಮ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾಲೇಜುಗಳಿಗೆ ಪರಿಶಿಷ್ಟ ಜಾತಿ ಹಾಗು ವರ್ಗದ ವಿದ್ಯಾರ್ಥಿಗಳು ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಿಸಲು ಶೀಘ್ರವಾಗಿ ನಿರ್ದೇಶನ ನೀಡಿ ಕ್ರಮ ಕೈಗೊಳ್ಳಲು ತಮ್ಮಲ್ಲಿ ಕೋರಿದೆ.

ಮುಂದುವರೆದು ಆಧಾರ್ ಜೋಡಣೆಯಾಗದಿರುವ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗಳಿಗೆ 2022-23 ರ ಹಾಗು ಹಿಂದಿನ ಸಾಲುಗಳಲ್ಲಿ ಮಂಜೂರಾಗಿರುವ ವಿದ್ಯಾರ್ಥಿವೇತನ ಮೊತ್ತವು ಈವರೆಗೂ ಕೂಡ ಜಮೆಯಾಗಿರುವುದಿಲ್ಲ. ಆದ್ದರಿಂದ ಎಲ್ಲಾ ಪರಿಶಿಷ್ಟ ಜಾತಿ ಹಾಗು ವರ್ಗದ ವಿದ್ಯಾರ್ಥಿಗಳು ತಮ್ಮ ಆಧಾರ್ ಸಂಖ್ಯೆಯನ್ನು NPCI ಗೆ ಲಿಂಕ್ ಮಾಡಿಸಲು ಸೂಚಿಸುವಂತೆ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರಿಗೆ ನಿರ್ದೇಶನ ನೀಡುವಂತೆ ಕೋರಲಾಗಿದೆ.

ವಂದನೆಗಳೊಂದಿಗೆ,

ತಮ್ಮ ನಂಬುಗೆಯ

ಸಮಾಜ ಕಲ್ಯಾಣ ಇಲಾಖೆ
ಸಹಾಯಕ ನಿರ್ದೇಶಕರು (ಗ್ರೇಡ್-1)
ಬೆಂಗಳೂರು ಉತ್ತರ ತಾಲ್ಲೂಕು,
ಯಲಹಂಕ.

AR(M)-(N)

13/12/23